**Bangalore**
**Regional News**
**27.04.2024 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

೧. ರಾಜ್ಯದಲ್ಲಿ ಎರಡನೇ ಹಂತದ ಲೋಕಸಭಾ ಚುನಾವಣೆ; ವಿವಿಧ ಪಕ್ಷಗಳ ನಾಯಕರಿಂದ ಬಿರುಸುಗೊಂಡ ಪ್ರಚಾರ

೨. ಬರ ನಿರ್ವಹಣೆಗಾಗಿ ಕೇಂದ್ರದಿಂದ ರಾಜ್ಯಕ್ಕೆ ೩ ಸಾವಿರದ ೪೫೪ ಕೋಟಿ ರೂಪಾಯಿ ನೆರವು

೩. ಆರು ದೇಶಗಳಿಗೆ ಈರುಳ್ಳಿ ರಫ್ತು ಮಾಡಲು ಕೇಂದ್ರದ ಅನುಮತಿ

೪. ಹಲವು ಜಿಲ್ಲೆಗಳಲ್ಲಿ ಬಿಸಿಗಾಳಿ; ಆರೋಗ್ಯದ ಬಗ್ಗೆ ನಿಗಾ ವಹಿಸಲು ಸೂಚನೆ

**<><*<><>*><>**

ಮುಂದಿನ ತಿಂಗಳ ೭ರಂದು ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಿಗೆ ಎರಡನೇ ಹಂತದ ಮತದಾನ ನಡೆಯಲಿದೆ. ವಿವಿಧ ಪಕ್ಷಗಳ ನಾಯಕರು ಅಬ್ಬರ ಪ್ರಚಾರದ ಮೂಲಕ ಮತಯಾಚನೆಯಲ್ಲಿ ತೊಡಗಿದ್ದಾರೆ. ಈ ಹಂತದಲ್ಲಿ ಸುಮಾರು ೨ ಕೋಟಿ ೫೦ ಲಕ್ಷ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದೆ. ಚುನಾವಣಾ ಕಣದಲ್ಲಿ ೨೨೭ ಅಭ್ಯರ್ಥಿಗಳಿದ್ದಾರೆ. ಇವರ ಪೈಕಿ ೨೦೬ ಪುರುಷ ಅಭ್ಯರ್ಥಿಗಳು ಹಾಗೂ ೨೧ ಮಹಿಳಾ ಅಭ್ಯರ್ಥಿಗಳು ಸೇರಿದ್ದಾರೆ. ಎರಡನೇ ಹಂತದ ಚುನಾವಣೆಗಾಗಿ ೨೮ ಸಾವಿರದ ೨೬೯ ಮತಗಟ್ಟೆಗಳನ್ನು ತೆರೆಯಲಾಗಿದೆ. ೧೨ ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ನೇರ ಹಣಾಹಣಿ ಏರ್ಪಟ್ಟಿದೆ. ಬಂಡಾಯದ ಕಾರಣ ಶಿವಮೊಗ್ಗ ಮತ್ತು ದಾವಣಗೆರೆ ಲೋಕಸಭಾ ಕ್ಷೇತ್ರಗಳಲ್ಲಿ ತ್ರಿಕೋನ ಸ್ಪರ್ಧೆ ಉಂಟಾಗಿದೆ. ಮತದಾನಕ್ಕಾಗಿ ಜಿಲ್ಲೆಗಳಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಬೆಳಗಾವಿಯಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲು ಚುನಾವಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಯುವಜನ ಸಬಲೀಕರಣ ಇಲಾಖೆಯಿಂದ ಸ್ವೀಪ್ ಕಪ್ ಕ್ರಿಕೆಟ್ ಟೂರ್ನಿ ಆಯೋಜಿಸಲಾಗಿತ್ತು. ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ರಾಹುಲ್ ಶಿಂಧೆ ಚಾಲನೆ ನೀಡಿ, ಮೇ ೭ರಂದು ನಡೆಯಲಿರುವ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತದಾನ ಮಾಡಬೇಕೆಂದರು.

**ಧ್ವನಿ ರಾಹುಲ್ ಶಿಂಧೆ.....**

ರಾಯಚೂರು ಜಿಲ್ಲೆಯಲ್ಲಿ ಮತದಾರರಲ್ಲಿ ಜಾಗೃತಿ ಮೂಡಿಸಲು, ನಮ್ಮ ನಡೆ, ಮತಗಟ್ಟೆ ಕಡೆ ಎಂಬ ಕಾರ್ಯಕ್ರಮವನ್ನು ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ನಾಳೆ ಜಿಲ್ಲೆಯ ಒಂದು ಸಾವಿರದ ೮೫೩ ಮತಗಟ್ಟೆಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಇದರ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ನಮ್ಮ ನಡೆ ಮತಗಟ್ಟೆ ಕಡೆ ಎಂಬ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ. ಇದರ ಅಂಗವಾಗಿ ನಾಳೆ ಚುನಾವಣಾ ಧ್ವಜಾರೋಹಣವನ್ನು ಜಿಲ್ಲಾಡಳಿತದ ಮುಂಭಾಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗರಿಮಾ ಪನ್ವಾರ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಮೇ ೭ ರಂದು ಲೋಕಸಭಾ ಚುನಾವಣೆ ಹಾಗೂ ಸುರಪುರ ವಿಧಾನಸಭೆ ಚುನಾವಣೆ ನಡೆಯಲಿದ್ದು, ಮತದಾರರಲ್ಲಿ ಜಾಗೃತಿ ಮೂಡಿಸಲು ಧ್ವಜಾರೋಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಕಲಬುರಗಿ ಜಿಲ್ಲೆಯ ೨ ಸಾವಿರದ ೩೭೮ ಮತಗಟ್ಟೆಗಳಲ್ಲಿ ನಾಳೆ ಜಿಲ್ಲಾ ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಧ್ವಜಾರೋಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಭವರ್ ಸಿಂಗ್ ಮೀನಾ ತಿಳಿಸಿದ್ದಾರೆ. ನಮ್ಮ ನಡೆ ಮತಗಟ್ಟೆ ಕಡೆ ಅಭಿಯಾನದ ಅಂಗವಾಗಿ ನಾಳೆ ಬೆಳಿಗ್ಗೆ ಕಲಬುರಗಿಯಲ್ಲಿ ಸೈಕಲ್ ರ‍್ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಗದಗ ಜಿಲ್ಲೆಯಲ್ಲಿ ಚುನಾವಣೆ ಸಂಬಂಧ ಮತಗಟ್ಟೆ

ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಎರಡನೇ ಹಂತದ ತರಬೇತಿ ಕಾರ್ಯಕ್ರಮ ಮೇ ೧ ರಂದು ನಡೆಯಲಿದೆ ಎಂದು ಜಿಲ್ಲಾಧಿಕಾರಿ ಎಂ.ಎಲ್.ವೈಶಾಲಿ ತಿಳಿಸಿದ್ದಾರೆ. ಕೊಪ್ಪಳ ಜಿಲ್ಲೆಯಲ್ಲಿ ೧೨-ಡಿ ನಮೂನೆಯಲ್ಲಿ ಅರ್ಜಿ ಸಲ್ಲಿಸಿರುವ ೮೫ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ವಿಶೇಷಚೇತನ ಮತದಾರರಿಗೆ ಹಾಗೂ ಕೋವಿಡ್ ಸೋಂಕಿತರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ನೀಡಲಾಗಿದೆ ಎಂದು ಕೊಪ್ಪಳ ಜಿಲ್ಲಾಧಿಕಾರಿ ನಳಿನ್ ಅತುಲ್ ತಿಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಎಲ್ಲಾ ಮತದಾರರು ಮತದಾನದ ಹಕ್ಕು ಚಲಾಯಿಸಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವ ಬಗ್ಗೆ ಜಾಗೃತಿ ಮೂಡಿಸಲು ಸ್ವೀಪ್ ಕಾರ್ಯಕ್ರಮದಡಿ ಕಾರವಾರದಲ್ಲಿಂದು ಆಯೋಜಿಸಿದ್ದ ಮೋಟಾರ್ ಸೈಕಲ್ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು. ಜಿಲ್ಲೆಯ ೮೫ ವರ್ಷ ಮೇಲ್ಪಟ್ಟವರು ಮತ್ತು ವಿಶೇಷಚೇತನರಿಗಾಗಿ ಕೈ ಗೊಂಡ ಮನೆಯಿಂದಲೇ ಮತದಾನ ಮಾಡುವ ಕಾರ್ಯಕ್ಕೆ ಉತ್ತಮ ಪ್ರತಿಕ್ರಿಯೆ ದೊರೆತಿದೆ ಎಂದರು. ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ ಮಾತನಾಡಿ, ಸ್ವೀಪ್ ಸಮಿತಿ ವತಿಯಿಂದ ಜಿಲ್ಲೆಯಾದ್ಯಂತ ಮತದಾನ ಜಾಗೃತಿಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಅರ್ಹ ಮತದಾರರು ತಮ್ಮ ಕುಟುಂಬ ಸಮೇತ ಮತಗಟ್ಟೆಗೆ ಆಗಮಿಸಿ ಮತದಾನ ಮಾಡುವ ಮೂಲಕ, ಕಳೆದ ವಿಧಾನಸಭಾ ಚುನಾವಣೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮತದಾನ ನಡೆಯಲು ಸಹಕರಿಸಬೇಕು ಎಂದರು.ಬೈಕ್ ಜಾಥಾದಲ್ಲಿ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಹೆಲ್ಮೆಟ್ ಧರಿಸಿ, ಮತದಾನ ಜಾಗೃತಿಯ ಪ್ರದರ್ಶನ ಫಲಕದೊಂದಿಗೆ ಸ್ಕೂಟರ್ ಚಲಾಯಿಸಿ ಗಮನ ಸೆಳೆದರು.ನಾಳೆ ಬೆಳಗಾವಿಯಲ್ಲಿ ಬಿಜೆಪಿ ವತಿಯಿಂದ ಪಕ್ಷದ ಬೃಹತ್ ಸಮಾವೇಶ ನಡೆಯಲಿದೆ. ಈ ಸಮಾವೇಶದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಹಿರಿಯ ನಾಯಕರಾದ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ, ಬಿ.ವೈ.ವಿಜಯೇಂದ್ರ, ಜೆಡಿಎಸ್ ಹಿರಿಯ ಧುರೀಣ ಎಚ್.ಡಿ. ದೇವೇಗೌಡ ಹಾಗೂ ಎಚ್.ಡಿ.ಕುಮಾರಸ್ವಾಮಿ ಭಾಗಿಯಾಗಲಿದ್ದಾರೆ ಎಂದು ಜಗದೀಶ್ ಶೆಟ್ಟರ್ ಬೆಳಗಾವಿಯಲ್ಲಿಂದು ತಿಳಿಸಿದರು. ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ ನಾಳೆ ಮತ್ತು ನಾಡಿದ್ದು, ರಾಜ್ಯ ಪ್ರವಾಸ ಕೈಗೊಂಡಿದ್ದು, ಎರಡು ದಿನ ೫ ಕಡೆಗಳಲ್ಲಿ ಬಹಿರಂಗ ಸಮಾವೇಶ ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ದಾವಣಗೆರೆ ಸಂಸದ ಜಿ.ಎಂ.ಸಿದ್ದೇಶ್ವರ್ ತಿಳಿಸಿದ್ದಾರೆ.ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ಬೆಳಿಗ್ಗೆ ೧೦ ಗಂಟೆಗೆ ಬೆಳಗಾವಿ, ೧೨ ಗಂಟೆಗೆ ಉತ್ತರ ಕನ್ನಡ, ಮಧ್ಯಾಹ್ನ ೨ ಗಂಟೆಗೆ ದಾವಣಗೆರೆಗೆ ಆಗಮಿಸಲಿದ್ದಾರೆ ಎಂದು ಹೇಳಿದರು. ನಾಳೆ ಹೊಸಪೇಟೆಯಲ್ಲೂ ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಅವರ ಭೇಟಿ ಹಿನ್ನೆಲೆಯಲ್ಲಿ ನಗರದಾದ್ಯಂತ ಬಿಗಿಭದ್ರತೆ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಲ್.ಹರಿಬಾಬು ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಹಾವೇರಿ ಮತ್ತು ದಾವಣಗೆರೆ ಬಿಜೆಪಿ ಲೋಕಸಭಾ ಅಭ್ಯರ್ಥಿಗಳ ಪರವಾಗಿ ಬಹಿರಂಗ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ಹೇಳಿದರು. ನಾಳೆ ಸಂಜೆ ೫ ಗಂಟೆಗೆ ಹೊಸಪೇಟೆ ತೆರಳಲಿದ್ದು. ೨೯ ರಂದು ಬಾಗಲಕೋಟೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅವರು ವಿವರ ನೀಡಿದರು. ವಿಜಯಪುರ ಜಿಲ್ಲೆಯ ಮುದ್ದೇಬಿಹಾಳದಲ್ಲಿ ಬಿಜೆಪಿ ಅಭ್ಯರ್ಥಿ ಪರವಾಗಿ ಹಿರಿಯ ನಾಯಕ ಬಿ. ಎಸ್. ಯಡಿಯೂರಪ್ಪ ಇಂದು ಮತ ಯಾಚಿಸಿದರು. ಬಾಗಲಕೋಟೆಯಲ್ಲಿ ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಮುಖ್ಯಮಂತ್ರಿ ಸಿದ್ದಾರಾಮಯ್ಯ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಪ್ರಚಾರ ನಡೆಸಿದರು. ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ನಿನ್ನೆ ನಡೆದ ಚುನಾವಣೆಯಲ್ಲಿ ಒಟ್ಟಾರೆ ಶೇಕಡ ೬೯.೫೬ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಹನೂರು ಮತಗಟ್ಟೆ ಮತದಾನ ಹೊರತುಪಡಿಸಿ, ಕ್ಷೇತ್ರವಾರು, ಶೇಕಡ ಮತದಾನದ ವಿವರ ಹೀಗಿದೆ: ಉಡುಪಿ-ಚಿಕ್ಕಮಗಳೂರು-೭೭.೧೫, ಹಾಸನ-೭೭.೬೮, ದಕ್ಷಿಣ ಕನ್ನಡ-೭೭.೫೬, ಚಿತ್ರದುರ್ಗ-೭೩.೩೦, ತುಮಕೂರು-೭೮.೦೫, ಮಂಡ್ಯ-೮೧.೬೭, ಮೈಸೂರು-೭೦.೬೨, ಚಾಮರಾಜನಗರ-೭೬.೮೧, ಬೆಂಗಳೂರು ಗ್ರಾಮಾಂತರ-೬೮.೩೦, ಬೆಂಗಳೂರು ಉತ್ತರ-೫೪.೪೫, ಬೆಂಗಳೂರು ಕೇಂದ್ರ-೫೪.೦೬, ಬೆಂಗಳೂರು ದಕ್ಷಿಣ-೫೩.೧೭, ಚಿಕ್ಕಬಳ್ಳಾಪುರ-೭೭, ಕೋಲಾರ ಕ್ಷೇತ್ರದಲ್ಲಿ ಶೇಕಡ ೭೮.೨೭ರಷ್ಟು ಮತದಾನವಾಗಿದೆ. ಮಂಡ್ಯ ಕ್ಷೇತ್ರದಲ್ಲಿ ಅತಿ ಹೆಚ್ಚು ಅಂದರೆ ೮೧.೬೭ ಹಾಗೂ ಬೆಂಗಳೂರು ದಕ್ಷಿಣ ಕ್ಷೇತ್ರದಲ್ಲಿ ಅತಿ ಕಡಿಮೆ ಅಂದರೆ ಶೇಕಡ ೫೩.೧೭ರಷ್ಟು ಮತದಾನವಾಗಿದೆ.

**<><*<><>*><>**

ರಾಜ್ಯದ ಬರ ನಿರ್ವಹಣೆಗಾಗಿ ಕೇಂದ್ರ ೩ ಸಾವಿರದ ೪೫೪ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಲಬುರಗಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಎನ್‌ಡಿಆರ್‌ಎಫ್ ನಿಯಮಾವಳಿ ಪ್ರಕಾರ ರಾಜ್ಯಕ್ಕೆ ೧೮ ಸಾವಿರದ ೧೭೧ ಕೋಟಿ ರೂಪಾಯಿ ಬರಬೇಕಾಗಿದೆ. ಆದರೆ ಕೇಂದ್ರ ಸರ್ಕಾರ ಈಗ ೩ ಸಾವಿರದ ೪೫೪ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ ಎಂದರು. ರಾಜ್ಯದ ೨೨೩ ತಾಲೂಕುಗಳನ್ನು ಕಳೆದ ವರ್ಷವೇ ಬರ ಪೀಡಿತವೆಂದು ಘೋಷಣೆ ಮಾಡಲಾಗಿತ್ತು. ಸುಮಾರು ೪೮ ಲಕ್ಷ ಹೆಕ್ಟೇರ್‌ನಲ್ಲಿನ ಬೆಳೆ ಹಾನಿಯಾಗಿತ್ತು. ಇದರ ಒಟ್ಟಾರೆ ನಷ್ಟ ೩೫ ಸಾವಿರ ಕೋಟಿ ರೂಪಾಯಿಗಳಾಗಿತ್ತು. ವಾಸ್ತವ ಸ್ಥಿತಿ ಹೀಗಿದ್ದರೂ, ರಾಜ್ಯ ಕೇಳಿದ್ದು ೧೮ ಸಾವಿರ ಕೋಟಿ ರೂಪಾಯಿ ಮಾತ್ರ ಎಂದು ಮುಖ್ಯಮಂತ್ರಿ ತಿಳಿಸಿದರು. ಬೆಂಗಳೂರಿನಲ್ಲಿ ವಿಧಾನಸಭೆಯ ವಿರೋಧಪಕ್ಷದ ನಾಯಕ ಆರ್.ಅಶೋಕ್ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದ ಜನರ ನೆರವಿಗಾಗಿ ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡಿದೆ. ರಾಜ್ಯ ಸರ್ಕಾರ ಸರಿಯಾದ ಮಾಹಿತಿಯನ್ನು ಸಕಾಲದಲ್ಲಿ ನೀಡದೇ ಇರುವ ಕಾರಣ ಪರಿಹಾರ ಬಿಡುಗಡೆ ವಿಳಂಬವಾಗಿದೆ. ಇದಕ್ಕೆ ಕೇಂದ್ರವನ್ನು ದೂಷಣೆ ಮಾಡುವುದು ಸರಿಯಲ್ಲ. ಚುನಾವಣಾ ಆಯೋಗದ ಅನುಮತಿಯ ನಂತರ ಕೇಂದ್ರ ಸರ್ಕಾರ, ರಾಜ್ಯಕ್ಕೆ ಬರ ಪರಿಹಾರದ ಹಣ ಬಿಡುಗಡೆ ಮಾಡಿದೆ. ರಾಜ್ಯ ಸರ್ಕಾರ ತನ್ನ ಪಾಲಿನ ಹಣ ಸೇರಿಸಿ ರೈತರಿಗೆ ದುಪ್ಪಟ್ಟು ಪರಿಹಾರ ನೀಡಲಿ ಎಂದು ಅಶೋಕ್ ಒತ್ತಾಯಿಸಿದರು. ಈ ನಡುವೆ, ಕೇಂದ್ರದ ಈ ನಿರ್ಧಾರವನ್ನು ಬಿಜೆಪಿ ಹಿರಿಯ ನಾಯಕ, ಬಸವರಾಜ ಬೊಮ್ಮಾಯಿ ಸ್ವಾಗತಿಸಿದ್ದಾರೆ.

<><*<><>*><>

ಕೇಂದ್ರ ಸರ್ಕಾರ, ಆರು ದೇಶಗಳಿಗೆ ೯೯ ಸಾವಿರ ಮೆಟ್ರಿಕ್ ಟನ್ ಈರುಳ್ಳಿ ರಫ್ತು ಮಾಡಲು ಅನುಮೋದನೆ ನೀಡಿದೆ ಎಂದು ಗ್ರಾಹಕ ವ್ಯವಹಾರಗಳ ಸಚಿವಾಲಯ ತಿಳಿಸಿದೆ.  ಬಾಂಗ್ಲಾದೇಶ, ಸಂಯುಕ್ತ ಅರಬ್ ಎಮಿರೇಟ್ಸ್ (ಯುಎಇ), ಭೂತಾನ್, ಬೆಹರಿನ್, ಮಾರಿಷಸ್ ಮತ್ತು ಶ್ರೀಲಂಕಾಗೆ ಈರುಳ್ಳಿ ರಫ್ತು ಮಾಡಲು ಅವಕಾಶ ನೀಡಿದೆ. ಇದಲ್ಲದೆ, ರಫ್ತು ಮಾರುಕಟ್ಟೆಗಾಗಿಯೇ ವಿಶೇಷವಾಗಿ ಬೆಳೆಯಲಾದ ೨ ಸಾವಿರ ಮೆಟ್ರಿಕ್ ಟನ್ ಬಿಳಿಯ ಈರುಳ್ಳಿಯನ್ನು ಪಶ್ಚಿಮ ಏಷ್ಯಾ ಹಾಗೂ ಯೂರೋಪಿಯನ್ ದೇಶಗಳಿಗೆ ನಿರ್ಯಾತ ಮಾಡಲು ಅವಕಾಶ ಕಲ್ಪಿಸಿದೆ. ಕಳೆದ ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ಈರುಳ್ಳಿ ಇಳುವರಿ ಕಡಿಮೆಯಾದ ಕಾರಣ ದೇಶೀಯ ಮಾರುಕಟ್ಟೆಯಲ್ಲಿ ಈರುಳ್ಳಿ ಲಭ್ಯತೆಯನ್ನು ಖಾತರಿಪಡಿಸಲು ಕಳೆದ ಡಿಸೆಂಬರ್ ತಿಂಗಳಲ್ಲಿ ಈರುಳ್ಳಿ ರಫ್ತನ್ನು ನಿಷೇಧಿಸಲಾಗಿತ್ತು. ಪ್ರಸ್ತುತ ಹಿಂಗಾರು ಹಂಗಾಮಿನಲ್ಲಿ ಬೆಲೆ ಸ್ಥಿರತೆ ನಿಧಿಯಡಿ ಒಟ್ಟು ೫ ಲಕ್ಷ ಟನ್ ಈರುಳ್ಳಿ ಸಂಗ್ರಹಿಸಲು ನಿಗದಿಪಡಿಸಲಾಗಿದೆ. ಈರುಳ್ಳಿ ಸಂಗ್ರಹ ಮತ್ತು ದಾಸ್ತಾನಿಗಾಗಿ ಭಾರತದ ರಾಷ್ಟ್ರೀಯ ಸಹಕಾರಿ ಬಳಕೆದಾರರ ಒಕ್ಕೂಟ ಹಾಗೂ ನಾಫೆಡ್ ಸಂಸ್ಥೆಗಳು ಸ್ಥಳೀಯ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಳ್ಳುತ್ತಿವೆ ಎಂದು ಸಚಿವಾಲಯ ತಿಳಿಸಿದೆ. ಈರುಳ್ಳಿ ಸಂಗ್ರಹ ಹಾನಿ ತಪ್ಪಿಸಲು ಗ್ರಾಹಕ ವ್ಯವಹಾರ ಇಲಾಖೆ, ಮುಂಬೈಯ ಬಿಎಆರ್‌ಸಿ ತಂತ್ರಜ್ಞಾನ ನೆರವಿನಿಂದ ಶೈತ್ಯ ಸಂಗ್ರಹ ಸಾಮರ್ಥ್ಯವನ್ನು ಕಳೆದ ವರ್ಷದ ೧ ಸಾವಿರದ ೨೦೦ ಮೆಟ್ರಿಕ್ ಟನ್‌ಗಳಿಂದ ಈ ವರ್ಷ ೫ ಸಾವಿರ ಮೆಟ್ರಿಕ್ ಟನ್‌ಗಳಿಗೆ ಹೆಚ್ಚಿಸಲು ನಿರ್ಧರಿಸಿದೆ ಎಂದು ತಿಳಿಸಲಾಗಿದೆ.

<><*<><>*><>

ರಾಜ್ಯದಲ್ಲಿ ಮೇ ೭ರಂದು ೧೪ ಲೋಕಸಭಾ ಕ್ಷೇತ್ರಗಳಿಗೆ ಎರಡನೇ ಹಂತದ ಮತದಾನ ನಡೆಯಲಿದೆ.  ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಮೇ ೭ರಂದು ಚುನಾವಣೆ ನಡೆಯಲಿದೆ. ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗದ ಜಿಲ್ಲಾ ವರದಿಗಾರರು ಸಿದ್ಧಪಡಿಸಿರುವ ಉಳಿದ ೧೪ ಲೋಕಸಭಾ ಕ್ಷೇತ್ರಗಳ ಸಮಗ್ರ ಚಿತ್ರಣವನ್ನು ಒದಗಿಸುವ 'ಮತಕ್ಷೇತ್ರ ದರ್ಶನ' ಮಾಹಿತಿ ಇಂದಿನಿಂದ ಪ್ರಸಾರವಾಗಲಿದೆ.

**ಈಗ ಬಾಗಲಕೋಟೆ ಲೋಕಸಭಾ ಕ್ಷೇತ್ರದ ವಿವರಗಳು :**

**ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಪರಶುರಾಮ್  ಪೇಟಕರ್**

ಬಾಗಲಕೋಟೆ ಜಿಲ್ಲೆ ಸಂಪತ್‌ಭರಿತವಾಗಿದ್ದು, ಚಾಲುಕ್ಯ, ರಾಷ್ಟ್ರಕೂಟರ ಇತಿಹಾಸದ ಕುರುಹು ಇರುವ ಕೇಂದ್ರಸ್ಥಾನವಾಗಿದೆ. ಈ ಜಿಲ್ಲೆ ಮೊದಲ ಅಖಂಡ ವಿಜಯಪುರದಲ್ಲಿತ್ತು. ಭಾರತದ ೫೦ನೇ ಸ್ವಾತಂತ್ರ್ಯ ವರ್ಷಾಚರಣೆ ಸಂದರ್ಭದಲ್ಲಿ ಅಂದ್ರೆ ೧೯೯೭ರಲ್ಲಿ  ಪ್ರತ್ಯೇಕ ಜಿಲ್ಲೆಯಾಗಿ ರೂಪಗೊಂಡಿತು. ಬಾಗಲಕೋಟೆ ಜಿಲ್ಲೆಯಲ್ಲಿ ಬಾದಾಮಿ,

ಬಾಗಲಕೋಟೆ, ಬೀಳಗಿ, ಹುನಗುಂದ, ಜಮಖಂಡಿ ಮತ್ತು ಮುಧೋಳ ಎಂಬ ಆರು ತಾಲೂಕುಗಳನ್ನು ಹೊಂದಿದೆ. ೨೦೧೮ರಲ್ಲಿ ಗುಳೇದಗುಡ್ಡ, ಇಳಕಲ್, ರಬಕವಿ-ಬನಹಟ್ಟಿ ಎಂಬ ಮೂರು ಹೊಸ ತಾಲೂಕು ಕೇಂದ್ರಗಳು ಸೃಷ್ಠಿಯಾಗಿವೆ. ಬಾಗಲಕೋಟೆ ಆಲಮಟ್ಟಿ ಆಣೆಕಟ್ಟು ನಿರ್ಮಾಣಕ್ಕೆ ಮುಳುಗಡೆ ಹೊಂದಿ ನವನಗರ ಸೃಷ್ಠಿಯಾಗಿತು. ಮುಳುಗಡೆ ಜಿಲ್ಲೆ ಎಂಬ ಹಣೆಪಟ್ಟಿ ಪಡೆದ ಬಾಗಲಕೋಟೆ ಲೋಕಸಭಾ ಕ್ಷೇತ್ರವು ಎಂಟು ವಿಧಾನಸಭಾ ಕ್ಷೇತ್ರಗಳನ್ನು ಹೊಂದಿದೆ. ಅಂದರೆ ಬಾದಾಮಿ, ಬೀಳಗಿ, ಬಾಗಲಕೋಟೆ,ಹುನಗುಂದ, ಮುಧೋಳ,ಜಮಖಂಡಿ,ತೇರದಾಳ ಸೇರಿದಂತೆ ಗದಗ ಜಿಲ್ಲೆಯ ನರಗುಂದ ವಿಧಾನಸಭಾ ಕ್ಷೇತ್ರವನ್ನೂ ಒಳಗೊಂಡಿದೆ. ಬಾಗಲಕೋಟೆ ಲೋಕಸಭಾ ಕ್ಷೇತ್ರದಲ್ಲಿ ೨೦೦೪,೨೦೦೯,೨೦೧೪,೨೦೧೯ ರ ನಾಲ್ಕು ಚುನಾವಣೆಗಳ ಸಂಸದ ಪಿ.ಸಿ.ಗದ್ದಿಗೌಡರ ಗೆಲವು ಸಾಧಿಸಿದ್ದರು. ೨೦೧೯ರ ಲೋಕಸಭಾ ಚುನಾವಣೆಯಲ್ಲಿ ಶೇಕಡ ೭೦.೬೨ ರಷ್ಟು ಮತದಾನವಾಗಿತ್ತು. ಒಟ್ಟು ೧೫ ಜನರು ಈ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ್ದರು. ಬಿಜೆಪಿಯ ಹಾಲಿ ಸಂಸದಪಿ.ಸಿ.ಗದ್ದಿಗೌಡರ ಅವರು ಒಟ್ಟು ೬ ಲಕ್ಷ ೬೪ ಸಾವಿರದ ೬೩೮ ಮತಗಳಗಳನ್ನು ಪಡೆದು ಗೆಲವು ಸಾಧಿಸಿದ್ದರು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿದ್ದ ವೀಣಾ ವಿಜಯಾನಂದ ಕಾಶಪ್ಪನವರ ೪ ಲಕ್ಷ ೯೬ಸಾವಿರದ ೬೪೫ ಮತಗಳನ್ನು ಪಡೆದುಕೊಂಡು ಪರಾಭವಗೊಂಡಿದ್ದರು. ೨೦೨೪ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಬಾಗಲಕೋಟೆ ಕ್ಷೇತ್ರಕ್ಕೆ ಹೊಸ ಮುಖ ಪರಿಚಯಿಸಿದೆ. ಬಾಗಲಕೋಟೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಸಂಯುಕ್ತಾ ಪಾಟೀಲ ಅವರು ಕಾಂಗ್ರೆಸ್ ಪಕ್ಷದಲ್ಲಿ ಕರ್ನಾಟಕ ರಾಜ್ಯ ಪ್ರದೇಶ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ, ವಿಜಯಪುರ ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದಾರೆ. ಈಗ ಅವರು ಬಾಗಲಕೋಟೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದು, ಗದ್ದಿಗೌಡರ ವಿರುದ್ದ ಗೆಲ್ಲಲೇ ಬೇಕು ಎಂಬ ಛಲವನ್ನಿಟ್ಟುಕೊಂಡು ಕ್ಷೇತ್ರಾದ್ಯಂತ ಮತಾಶೀರ್ವಾದ ಕೇಳುತ್ತಿದ್ದಾರೆ.

**<><*<><>*><>**

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದಿನ ಎರಡು-ಮೂರು ದಿನ ಬಿಸಿ ಗಾಳಿ ಬೀಸುವ ಸಾಧ್ಯತೆ ಕಾರಣ ಜನರು ಆರೋಗ್ಯದ ಬಗ್ಗೆ ಎಚ್ಚರಿಕೆ ವಹಿಸುವಂತೆ ಭಾರತೀಯ ಹವಾಮಾನ ಇಲಾಖೆ ಸಲಹೆ ನೀಡಿದೆ. ರಾಯಚೂರು, ಯಾದಗಿರಿ, ಕಲಬುರಗಿ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ಬೀದರ್, ವಿಜಯನಗರ, ಗದಗ, ದಾವಣಗೆರೆ, ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಹಾವೇರಿ, ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಬಿಸಿ ಗಾಳಿ ಬೀಸುವ ಸಂಭವವಿದೆ ಎಂದು ಇಲಾಖೆ ವರದಿ ತಿಳಿಸಿದೆ. ಇದೇ ೩೦ ರಿಂದ ಕೆಲವು ಜಿಲ್ಲೆಗಳಲ್ಲಿ ಹಗುರ ಮಳೆಯಾಗಲಿದೆ ಎಂದು ಇಲಾಖೆ ವರದಿ ತಿಳಿಸಿದೆ.

**<><*<><>*><>**

ಕೊಡಗು ಜಿಲ್ಲೆಯ ನಾಪೋಕ್ಲುವಿನಲ್ಲಿ ನಡೆದಿರುವ ಕೊಡವ ಕುಟುಂಬಗಳ ನಡುವಣ 'ಕುಂಡ್ಯೋಳಂಡ ಕಪ್ ಹಾಕಿ ಉತ್ಸವ'ದ ಫೈನಲ್ ಪಂದ್ಯದಲ್ಲಿ ಚೇಂದಂಡ ಮತ್ತು ನೆಲ್ಲಮಕ್ಕಡ ತಂಡಗಳು ಪ್ರಶಸ್ತಿಗಾಗಿ ನಾಳೆ ಸೆಣಸಲಿವೆ.

**<><*<><>*><>**

ಇನ್ನು ಹವಾವರ್ತಮಾನ...

ರಾಜ್ಯದ ಉತ್ತರ ಒಳನಾಡಿನ ಹಲವೆಡೆ ಚದುರಿದಂತೆ ಮಳೆಯಾಗಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಒಣಹವೆ ಮುಂದುವರೆದಿದೆ. ಕಲಬುರಗಿಯಲ್ಲಿ ದಿನದ ಗರಿಷ್ಠ ತಾಪಮಾನ ೪೨.೪ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಮುನ್ಸೂಚನೆಯಂತೆ ಮುಂದಿನ ೨೪ ಗಂಟೆಗಳಲ್ಲಿ ರಾಜ್ಯಾದ್ಯಂತ ಒಣಹವೆ ಮುಂದುವರಿಯಲಿದೆ. ಬೆಂಗಳೂರು ಸುತ್ತಮುತ್ತ ಶುಭ್ರ ಆಕಾಶ. ಗರಿಷ್ಠ ೩೭ ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**